ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.

## ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **875/2018**

ಫಿರ್ಯಾದಿ ಃ ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

- ವಿರುದ್ಧ -

ಆರೋಪಿ/ತರುಃ

1) ಶ್ರೀನಿವಾಸ ಬಿನ್ ಕಣ್ಣಪ್ಪ, 43 ವರ್ಷ,
2) ಮಂಜುನಾಥ ಬಿನ್ ಅಪ್ಪಾದೊರೈ, 51 ವರ್ಷ,
3) ಮಂಜು ಬಿನ್ ಪಳನಿ, 38 ವರ್ಷ,
4) ಮೋಹನ ಬಿನ್ ಕಂದಸ್ವಾಮಿ, 44 ವರ್ಷ,
5) ಲಕ್ಷ್ಮಿದೀಪ ಕೋಂ ಶ್ರೀನಿವಾಸ, 42 ವರ್ಷ,
6) ವೀಣಾ ಕೋಂ ಶೇಖರ, 25 ವರ್ಷ,
7) ಭಾಗ್ಯ ಕೋಂ ಮಂಜು, 25 ವರ್ಷ,

ಎಲ್ಲರೂ ವಾಸಃ ದೊಡ್ಡಕುಂದೂರು, ಲಕ್ಕವಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು

****

## -ಃ ದೋಷಾರೋಪಣೆಃ-

ಶ್ರೀಮತಿ ಉರ್ಮಿಳ.ವಿ., ಬಿ.ಎ.ಎಲ್, ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿತರಾದ ನಿಮ್ಮ ವಿರುದ್ಧ ಮಾಡುವ ದೋಷಾರೋಪಣೆಗಳೇನೆಂದರೆಃ-

ದಿನಾಂಕ 27.05.2018 ರಂದು ಮಧ್ಯಾಹ್ನ 01.00 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನ, ದೊಡ್ಡಕುಂದೂರು ಗ್ರಾಮದಲ್ಲಿ ವಾಸಿಯಾದ ಚಾಸಾ-1 ಶ್ರೀಮತಿ ರಂಜಿತರವರು ತನ್ನ ಗಂಡ ರಾಮ್ ರಾಜ್ ರವರು ದಿನಾಂಕ 26.05.2018 ರಂದು ಮೃತಪಟ್ಟಿದ್ದರಿಂದ ಅವರ ಅಂತ್ಯಕ್ರಿಯೆಯನ್ನುಮುಗಿಸಿಕೊಂಡು ಚಾಸಾ-1, ಚಾಸಾ-2 ಶ್ರೀಮತಿ ಲಕ್ಷ್ಮಿ, ಚಾಸಾ-3 ಶ್ರೀಮತಿ ರಾಧ ಮತ್ತು ಚಾಸಾ-4 ಶ್ರೀಮತಿ ಮಲ್ಲಿಗ ರವರುಗಳು ಮನೆಗೆ ಬಂದಾಗ ಆರೋಪಿತರಾದ ನೀವು ಏಕೋದ್ದೇಶದಿಂದ ಬಂದು, ಏಕಾಏಕಿ ಅವಾಚ್ಯ ಶಬ್ದಗಳಿಂದ ಚಾಸಾ-1 ರಿಂದ 4 ರವರಿಗೆ ಬೈದು ಅವಮಾನ ಮಾಡಿದ್ದು,

ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು ಚಾಸಾ-1 ರವರ ಮನೆ ಒಳಗಡೆ ನುಗಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 448 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು, 1 ರಿಂದ 4 ನೇ ಆರೋಪಿತರು ಚಾಸಾ-1 ರಿಂದ 4 ರವರಿಗೆ ಕೈಗಳಿಂದ ಹೊಡೆದು ನೋವುಂಟು ಮಾಡಿದ್ದು, 5 ರಿಂದ 7 ನೇ ಆರೋಪಿತರು ಚಾಸಾ-2 ರಿಂದ 4 ರವರಿಗೆ ಕೈಗಳಿಂದ ಹೊಡೆದು ಬಟ್ಟೆಯನ್ನು ಹಿಡಿದು ಎಳೆದಾಡಿ ಹರಿದು ಹಾಕಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು, ಚಾಸಾ-1 ರಿಂದ 4 ರವರಿಗೆ ನಮ್ಮ ತಂಟೆಗೆ ಬಂದರೆ ನಿಮ್ಮನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 506 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪದ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ 07.04.2025

ಸಹಿ

**(ಉರ್ಮಿಳ.ವಿ)**
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.